**All India Radio: Bangalore**
**Regiopnal Bulletin In Kannada**
**08.05.2025 / 2.30 pm**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**08.05.2025 / 2.30 pm**

##########

**ಮುಖ್ಯಾಂಶಗಳು**

1. **ಕೇಂದ್ರ ಸರ್ಕಾರದ ಸೂಚನೆಯಂತೆ ರಾಜ್ಯದ ವಿವಿಧೆಡೆ ಅಣಕು ಕವಾಯತು ಮುನ್ನೆಚ್ಚರಿಕೆ ಕ್ರಮ ಮುಖ್ಯಮಂತ್ರಿ ಸಿದ್ಧರಾಮಯ್ಯ**
2. **ರಾಜ್ಯದ ವಿವಿಧ ಅಣೆಕಟ್ಟು ಪ್ರದೇಶಗಳಲ್ಲಿ ವ್ಯಾಪಕ ಭದ್ರತಾ ವ್ಯವಸ್ಥೆ**
3. **ಬೆಂಗಳೂರಿನ ಮೂಲ ಸೌಕರ್ಯ ಯೋಜನೆಗಳ ಅನುಷ್ಠಾನಕ್ಕೆ ನೆರವು ನೀಡುವಂತೆ ಕೇಂದ್ರಕ್ಕೆ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಮನವಿ**
4. **ರಾಜ್ಯದ ೬ ಜಿಲ್ಲೆಗಳಲ್ಲಿ ಶೀಥಲೀಕರಣ ಘಟಕ ನಿರ್ಮಾಣ; ಸಚಿವ ಎಸ್.ಎಸ್.ಮಲ್ಲಿಕಾರ್ಜುನ**

##########

ಪಾಕಿಸ್ತಾನದ ಉಗ್ರರ ನೆಲೆಗಳ ಮೇಲೆ ಭಾರತ ದಾಳಿ ಮಾಡಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಸೂಚನೆಯಂತೆ ರಾಜ್ಯದಲ್ಲಿ ಎಲ್ಲೆಡೆ ಅಣುಕು ಕವಾಯತು ಆಯೋಜಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಗೆಜ್ಜಲಗೆರೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಣೆಕಟ್ಟುಗಳ ಸುರಕ್ಷತೆಯ ದೃಷ್ಟಿಯಲ್ಲಿ ಎಲ್ಲೆಡೆ ಎಚ್ಚರಿಕೆ ನೀಡಲಾಗಿದ್ದು, ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

**ಧ್ವನಿ : ಮುಖ್ಯಮಂತ್ರಿ ಸಿದ್ಧರಾಮಯ್ಯ (೧೮ ಸೆಕೆಂಡ್ಸ್)**

ಮುಜರಾಯಿ ಇಲಾಖೆ ದೇವಾಲಯಗಳಲ್ಲಿ ಭಾರತೀಯ ಸೇನೆಯನ್ನು ಬೆಂಬಲಿಸಿ ಪೂಜೆ ಮಾಡುವ ಬಗ್ಗೆ ಸಚಿವ ರಾಮಲಿಂಗಾರೆಡ್ಡಿಯವರೊಂದಿಗೆ ಮಾತನಾಡಿ, ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

##########

ಭಾರತ ಹಾಗೂ ಪಾಕಿಸ್ತಾನ ನಡುವೆ ಗಡಿಯಲ್ಲಿ ಉದ್ವಿಗ್ನ ಪರಿಸ್ಥಿತಿ ಇರುವ ಕಾರಣ ಶರಾವತಿ ಕಣಿವೆ ಯೋಜನಾ ಪ್ರದೇಶದಲ್ಲಿ ಕರ್ನಾಟಕ ವಿದ್ಯುತ್ ನಿಗಮದ ಭದ್ರತಾ ವ್ಯವಸ್ಥೆಯನ್ನು ಹೈ ಅಲರ್ಟ್ ಮಾಡಿ ಇರಿಸಲಾಗಿದೆ.ಲಿಂಗನಮಕ್ಕಿ ಅಣೆಕಟ್ಟು, ಲಿಂಗನಮಕ್ಕಿ ಜಲವಿದ್ಯುದಾಗಾರ, ಮಹಾತ್ಮ ಗಾಂಧಿ ಮತ್ತು ಶರಾವತಿ ಜಲವಿದ್ಯುದಾಗಾರಗಳಲ್ಲಿ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ಪಡೆಯ ಕಮಾಂಡೊ ತರಬೇತಿ ಪಡೆದ ಅನುಭವಿ ಸಿಬ್ಬಂದಿ ಭದ್ರತಾ ಕಾರ್ಯಪಡೆಯ ಕಾವಲು ಇದೆ. ಎಲ್ಲ ಭದ್ರತಾ ಸಿಬ್ಬಂದಿ ಶರಾವತಿ ಕೇಂದ್ರ ಸ್ಥಾನದಲ್ಲಿಯೇ ಇರಬೇಕು. ಯಾವುದೇ ತುರ್ತು ಸಂದರ್ಭದಲ್ಲಿ ಕರ್ತವ್ಯ ನಿರ್ವಹಣೆಗೆ ಸದಾ ಸಿದ್ಧರಿರಬೇಕು ಎಂಬ ಸಂದೇಶ ನೀಡಲಾಗಿದೆ.

##########

ಆಲಮಟ್ಟಿ ಜಲಾಶಯದ ಭದ್ರತೆ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ಪಡೆಯ (ಕೆಎಸ್ಐಎಸ್ಎಫ್) ಆಧೀನದಲ್ಲಿದ್ದು, ದಿನದ ೨೪ ಗಂಟೆಯೂ ಜಲಾಶಯಕ್ಕೆ ಹೆಚ್ಚಿನ ಭದ್ರತೆ ಇದೆ. ನಿತ್ಯವೂ ಜಲಾಶಯಕ್ಕೆ ಇದ್ದ ಹೆಚ್ಚಿನ ಭದ್ರತೆಯನ್ನು ಈಗ ಮತ್ತಷ್ಟು ಮುತುವರ್ಜಿ ವಹಿಸಿ ಭದ್ರತೆ ಕೈಗೊಳ್ಳಲಾಗುತ್ತಿದೆ.ಆಲಮಟ್ಟಿ ಪೆಟ್ರೋಲ್ ಪಂಪ್ ನಿಂದ ಆಲಮಟ್ಟಿ ಸರ್ಕಲ್ ಗೆ ಬರುವ ಪ್ರತಿ ವಾಹನಗಳ ವಿವರಣೆ ರಜಿಸ್ಟರ್ ನಲ್ಲಿ ಬರೆಯಲಾಗುತ್ತಿದ್ದು, ಅಗತ್ಯ ಬಿದ್ದರೆ ತಪಾಸಣೆಯನ್ನು ನಡೆಸಲಾಗುತ್ತಿದೆ ಎಂದು ಡ್ಯಾಮ್ ಭದ್ರತಾ ಉಸ್ತುವಾರಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಆಲಮಟ್ಟಿ ಅಣೆಕಟ್ಟಿನಲ್ಲಿ ಹೈ ಅಲರ್ಟ್  ಇದ್ದು, ತಪಾಸಣೆ ಮತ್ತಷ್ಟು ಬಿಗಿಗೊಳಿಸಲಾಗಿದೆ. "ಪೆಹಲ್ಗಾಮ್ ದಾಳಿಗೆ ಪ್ರತಿಯಾಗಿ ಭಾರತ ತಕ್ಕ ಪ್ರತಿದಾಳಿ ನಡೆಸಿದ್ದು, ಇದು ನಮ್ಮ ದೇಶದ ದಿಟ್ಟ ನಿರ್ಧಾರವನ್ನು ಪ್ರತಿಬಿಂಬಿಸುತ್ತದೆ, ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ್ ಶೆಟ್ಟರ್ ಹೇಳಿದ್ದಾರೆ.ಹುಬ್ಬಳ್ಳಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಜಮ್ಮು ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಭಾರತೀಯರ ಮೇಲೆ ಉಗ್ರರು ನಡೆಸಿದ ದಾಳಿಗೆ ಪ್ರತಿಸ್ಪಂದನವಾಗಿ, ಭಾರತದ ಸೇನೆ "ಆಪರೇಷನ್ ಸಿಂಧೂರ" ಎಂಬ ಹೆಸರಿನಲ್ಲಿ ಉಗ್ರರ ನೆಲೆಮಾಣಗಳ ಮೇಲೆ ನಿಖರ ದಾಳಿ ನಡೆಸಿದ್ದು ಶ್ಲಾಘನೀಯ.

**ಬೈಟ್: ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ್ ಶೆಟ್ಟರ್ (೩೭ ಸೆಕೆಂಡ್ಸ್)**

**##########**

ವಿಜಯಪುರದಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆಯ ಪೂರ್ವಸಿದ್ಧತೆಗಳ ಕುರಿತು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ  ನಿನ್ನೆ ಜಿಲ್ಲೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಸಭೆಯಲ್ಲಿ ವಿಜಯಪುರ ಭಾಗದ ಅತೀ ಅವಶ್ಯಕ ಯೋಜನೆಗಳ ಜೊತೆಗೆ ಸ್ಥಳೀಯ ಜನಪ್ರತಿನಿಧಿಗಳಿಂದ ಅವರವರ ಕ್ಷೇತ್ರಕ್ಕೆ ಅಗತ್ಯವಿರುವ ಯೋಜನೆಗಳ ಮಾಹಿತಿಯನ್ನು ಕೂಡಲೇ ಪಡೆದುಕೊಂಡು ಆಯಾ ಇಲಾಖೆಯ ಅನುಮೋದನೆಯನ್ನು ಪಡೆದುಕೊಳ್ಳಲು ಸಿದ್ಧತೆ ನಡೆಸಬೇಕೆಂದು  ಸಚಿವರು ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯ ಪ್ರಮುಖ ಬೇಡಿಕೆಗಳ ಕುರಿತು ಜಿಲ್ಲೆಯ ಜನಪ್ರತಿನಿಧಿಗಳ,ಇಲಾಖಾವಾರು ಮತ್ತು ಸರ್ಕಾರದಿಂದ ಅನುಮೋದನೆಗೊಂಡ ಯೋಜನೆಗಳ ವಿವಿರವಾದ ಪಟ್ಟಿಯನ್ನು ಸಿದ್ಧಪಡಿಸಿ, ಸರ್ಕಾರದ ಮುಖ್ಯಕಾರ್ಯದರ್ಶಿಗಳನ್ನು ಭೇಟಿ ಮಾಡಿ, ಚರ್ಚಿಸುವಂತೆ  ಜಿಲ್ಲಾಧಿಕಾರಿಗಳಿಗೆ ಸಚಿವ ಎಂ.ಬಿ.ಪಾಟೀಲ್ ನಿರ್ದೇಶಿಸಿದರು.

**##########**

ಬೆಂಗಳೂರು ನಗರದ ವಿವಿಧ ಮೂಲಭೂತ ಸೌಕರ್ಯಗಳಿಗೆ ನೆರವು ಹಾಗೂ ಸಹಾಖಾರ ನೀಡುವಂತೆ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಕೇಂದ್ರ ಸರಕಾರಕ್ಕೆ ಮನವಿ ಮಾಡಿದ್ದಾರೆ.ಬೆಂಗಳೂರು- ಕನಕಪುರ ನಡುವಣ ರಸ್ತೆ ಆರು ಪಥಕ್ಕೆ ಉನ್ನತೀಕರಣ, ನೆನೆಗುದಿಗೆ ಬಿದ್ದಿರುವ ಕಗ್ಗಲಿಪುರ ಟೋಲ್ ವರೆಗಿನ ರಸ್ತೆ ಕಾಮಗಾರಿ ಪೂರ್ಣಗೊಳಿಸಲು, ಸ್ಯಾಟಲೈಟ್ ರಿಂಗ್ ರಸ್ತೆ ಯೋಜನೆಯಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ಶೀಘ್ರ ಪರಿಹಾರ ಬಿಡುಗಡೆ, ಹೆಬ್ಬಾಳ ಜಂಕ್ಷನ್ ನಿಂದ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಪ್ರತ್ಯೇಕ ಮೇಲ್ಸೇತುವೆ ನಿರ್ಮಾಣ ಯೋಜನೆಗಳ ಅನುಷ್ಠಾನಕ್ಕೆ ಅಗತ್ಯ ನೆರವು ಹಾಗೂ ಸಹಕಾರ ನೀಡುವಂತೆ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ.ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಅಭಿವೃದ್ಧಿ ಸಚಿವರಾದ ನಿತಿನ್ ಗಡ್ಕರಿ ಅವರನ್ನು ನವದೆಹಲಿಯಲ್ಲಿ ನಿನ್ನೆ ಭೇಟಿ ಮಾಡಿ ವಿವಿಧ ಯೋಜನೆಗಳ ಅನುಷ್ಠಾನಕ್ಕೆ ನೆರವು ನೀಡುವಂತೆ ಮನವಿ ಸಲ್ಲಿಸಿದರು.ಹಾಲಿ ನಾಲ್ಕು ಪಥ ಇರುವ ಹೆದ್ದಾರಿ ೨೦೯ (ಬೆಂಗಳೂರು-ಕನಕಪುರ) ಅನ್ನು  ಎರಡೂ ಬದಿಯಲ್ಲಿ ಸರ್ವಿಸ್ ರಸ್ತೆ ಜತೆಗೆ ಆರು ಪಥಗಳಿಗೆ ಉನ್ನತೀಕರಣಗೊಳಿಸಬೇಕು. ಹಾರೋಹಳ್ಳಿ ಕೈಗಾರಿಕಾ ಪ್ರದೇಶ ಸೇರಿದಂತೆ ಈ ಪ್ರದೇಶದ ಅಭಿವೃದ್ಧಿಯಿಂದ ಈ ಹೆದ್ದಾರಿಯಲ್ಲಿ ವಾಹನ ಸಂಚಾರ ಗಣನೀಯ ಏರಿಕೆ ಕಂಡಿದೆ. ಈ ಭಾಗದಲ್ಲಿ ಸಂಚಾರ ಸುಗಮಗೊಳಿಸಲು, ಸಂಚಾರಿ ಸುರಕ್ಷತೆ,ಕೈಗಾರಿಕಾ ಪ್ರದೇಶದ ವಾಹನಗಳ ಸುಗಮ ಸಂಚಾರಕ್ಕೆ ಈ ಯೋಜನೆಯನ್ನು ಕೈಗೆತ್ತಿಕೊಳ್ಳಬೇಕು ಎಂದು

ಮನವಿ ಮಾಡಲಾಗಿದೆ.ರಾಷ್ಟ್ರೀಯ ಹೆದ್ದಾರಿ ೨೦೧೯ರಲ್ಲಿ ೭ ಕಿ.ಮೀ ಉದ್ದದ ರಸ್ತೆ ಕಾಮಗಾರಿ ಬಹುದಿನಗಳಿಂದ ನೆನೆಗುದಿಗೆ ಬಿದ್ದಿದೆ. ಈ ಯೋಜನೆಗೆ ಅಗತ್ಯ ಭೂಮಿಯನ್ನು ಸ್ವಾಧೀನಕ್ಕೆ ಪಡೆಯಲಾಗಿದ್ದು, ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ ಆಕ್ಷೇಪದಿಂದ ಈ ಯೋಜನೆ ಕಾಮಗಾರಿ ನಿಂತಿದೆ. ಈ ಕಾಮಗಾರಿಗೆ ಎದುರಾಗಿರುವ ಅಡಚಣೆಯನ್ನು ನಿವಾರಿಸಿ, ಆದಷ್ಟು ಬೇಗ ಯೋಜನೆ ಪೂರ್ಣಗೊಳಿಸಲು ಸಚಿವಾಲಯವು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಲಾಗಿದೆ.ಸ್ಯಾಟಲೈಟ್ ಟೌನ್ ರಿಂಗ್ ರೋಡ್ , ಡಾಬಸ್ ಪೇಟೆ, ಮಾಗಡಿ, ರಾಮನಗರ, ಹಾರೋಹಳ್ಳಿ ನಡುವೆ ಸಂಪರ್ಕ ವೃದ್ಧಿಸಲು ಹಾಗೂ ಮೂಲಸೌಕರ್ಯ ಒದಗಿಸಲು ಈ ಯೋಜನೆ ಮಹತ್ವದ್ದಾಗಿದೆ. ಈ ಯೋಜನೆಗೆ ಭೂಮಿ ಕಳೆದುಕೊಂಡಿರುವ ರೈತರಿಗೆ ಶೀಘ್ರವೇ ಪರಿಹಾರ ಮೊತ್ತ ಬಿಡುಗಡೆ ಮಾಡಬೇಕು. ಈ ಯೋಜನೆ ೨೦೧೯ರಲ್ಲಿ ಆರಂಭವಾಯಿತಾದರೂ ಪರಿಹಾರ ಬಿಡುಗಡೆ ತಡವಾಗಿರುವ ಹಿನ್ನೆಲೆಯಲ್ಲಿ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಯೋಜನೆ ಪ್ರಗತಿ ಕುಂಠಿತವಾಗಿದೆ ಎಂದು ಪತ್ರದಲ್ಲಿ ವಿವರಿಸಲಾಗಿದೆ. ಹೆಬ್ಬಾಳ ಜಂಕ್ಷನ್ ನಿಂದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ನಡುವಣ ೩೫ ಕಿ.ಮೀ ಉದ್ದದ ಪ್ರದೇಶದಲ್ಲಿ ಅಪಾರವಾದ ಅಭಿವೃದ್ಧಿಯಾಗಿದ್ದು, ಹೆಬ್ಬಾಳ ಜಂಕ್ಷನ್ ನಿಂದ ವಿಮಾನ ನಿಲ್ದಾಣಕ್ಕೆ ಪ್ರತ್ಯೇಕ ಮೇಲ್ಸೇತುವೆ ನಿರ್ಮಾಣ ಮಾಡಲು ನೆರವಾಗಬೇಕೆಂದು ಎಂದು ಮನವಿ ಮಾಡಲಾಗಿದೆ.

##########

ರಾಜ್ಯದ ೬ ಜಿಲ್ಲೆಗಳಲ್ಲಿ ತೋಟಗಾರಿಕಾ ಬೆಳೆಗಳಿಗೆ ಅನುಕೂಲವಾಗುವಂತೆ ಶೀಥಲೀಕರಣ ಘಟಕಗಳನ್ನು ನಿರ್ಮಿಸಲಾಗುತ್ತಿದೆ ಎಂದು ತೋಟಗಾರಿಕಾ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಹೇಳಿದ್ದಾರೆ. ಅವರು ದಾವಣಗೆರೆಯಲ್ಲಿ ಇಂದು ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿ ಹಾವೇರಿ, ಕೋಲಾರ, ಮಂಡ್ಯ ಶಿವಮೊಗ್ಗ, ವಿಜಯಪುರ ಮತ್ತು ಹಾಸನ ಜಿಲ್ಲೆಗಳಲ್ಲಿ ೧೪ ಸಾವಿರ ಮೆಟ್ರಿಕ್ ಟನ್ ಸಾಮರ್ಥ್ಯದ ಶೀಥಲೀಕರಣ ಘಟಕಗಳ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ ಎಂದರು. ಸಚಿವ ಸಂಪುಟದ ನಿರ್ಣಯಗಳ ಅನ್ವಯ ತೋಟಗಾರಿಕಾ ವಲಯಗಳ ಅಭಿವೃದ್ಧಿಗೆ ಹಲವು ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಚಿತ್ರದುರ್ಗ, ರಾಯಚೂರು ಮತ್ತು ಉತ್ತರಕನ್ನಡ ಜಿಲ್ಲೆಗಳಲ್ಲಿ ತಲಾ ಒಂದು ತೋಟಗಾರಿಕೆ ತರಬೇತಿ ಕೇಂದ್ರ ಮತ್ತು ಬೆಳಗಾವಿ ಜಿಲ್ಲೆಯ ಅರಬಾವಿಯಲ್ಲಿ ೧ ವಿದ್ಯಾರ್ಥಿ ನಿಲಯ ನಿರ್ಮಿಸಲಾಗುತ್ತಿದ್ದು ಸುಮಾರು ೩೫ ಕೋಟಿ ರೂಪಾಯಿ ವೆಚ್ಚದಲ್ಲಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಸಚಿವ ಮಲ್ಲಿಕಾರ್ಜುನ ತಿಳಿಸಿದರು.

###########